ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 13–9–2017

## ಪತ್ರಿಕಾ ಆಮಂತ್ರಣ

1. ದಕ್ಷಿಣ ಭಾರತ ಮಟ್ಟದ ಮಕ್ಕಳ ಹಕ್ಕುಗಳ ಪ್ರಾದೇಶಿಕ ಸಮ್ಮೇಳನ – 2017

**ಉದ್ಘಾಟನೆ:**

ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

**ಅಧ್ಯಕ್ಷತೆ:**

ಡಿ. ಹೆಚ್. ಶಂಕರಮೂರ್ತಿ, ಸಭಾಪತಿ, ಕರ್ನಾಟಕ ವಿಧಾನ ಪರಿಷತ್,

ದಿನಾಂಕ: 14–09–2017, ಗುರುವಾರ, ಸಮಯ : ಬೆಳಿಗ್ಗೆ 10.00 ಗಂಟೆಗೆ

ಸ್ಥಳ: ಕೊಠಡಿ ಸಂಖ್ಯೆ: 419, ವಿಕಾಸಸೌಧ, ಬೆಂಗಳೂರು.

ಸಂಖ್ಯೆ 56/181

## ಪತ್ರಿಕಾ ಪ್ರಕಟಣೆ

## ಮುಖ್ಯಮಂತ್ರಿಗಳಿಂದ ನಗರ ಪರಿವೀಕ್ಷಣೆ

**ಬೆಂಗಳೂರು ಸೆಪ್ಟೆಂಬರ್ 13(ಕರ್ನಾಟಕ ವಾರ್ತೆ)**

ಬೆಂಗಳೂರು ನಗರದ ಮಳೆಯಿಂದ ಹಾನಿಗೊಳಗಾದ ಸ್ಥಳಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಮುಖ್ಯಮಂತ್ರಿ ಅವರು ಮೊದಲು ಜೆ.ಸಿ. ರಸ್ತೆ ಕುಂಬಾರ ಗುಂಡಿಯ ದೊಡ್ಡನಾಲೆಯ ಹೂಳು ತೆಗೆಯುವ ಕಾಮಗಾರಿಯನ್ನು ವೀಕ್ಷಿಸಿದರು. ನಂತರ ಶಾಂತಿನಗರದ ಬಿ.ಎಂ.ಟಿ.ಸಿ. ವರ್ಕ್‌ಶಾಪ್ ಆವರಣದಲ್ಲಿ ಮಳೆ ನೀರು ತುಂಬಿ ಉಂಟಾಗುವ ಸಮಸ್ಯೆಗೆ ಪ್ರತ್ಯೇಕ ಮಳೆನೀರು ಚರಂಡಿ ನಿರ್ಮಿಸಲು 15 ಕೋಟಿ ರೂ. ವೆಚ್ಚದಲ್ಲಿ ರೂಪಿಸಿರುವ ಯೋಜನೆ ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳ ಜೊತೆ ಬೆಂಗಳೂರು ನಗರಾಭಿವೃದ್ಧಿ ಸಚಿವ ಕೆ.ಜೆ. ಜಾರ್ಜ್, ಗೃಹ ಸಚಿವ ರಾಮಲಿಂಗಾರೆಡ್ಡಿ, ನಗರಾಭಿವೃದ್ಧಿ ಹಾಗೂ ಹಜ್ ಸಚಿವ ಆರ್. ರೋಷನ್‌ಬೇಗ್, ಸಾರಿಗೆ ಸಚಿವ ಎಸ್.ಎಂ. ರೇವಣ್ಣ, ಕೊಳಗೇರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಆರ್.ವಿ. ದೇವರಾಜ್, ಬೆಂಗಳೂರು ಮಹಾನಗರ ಪಾಲಿಕೆ ಮೇಯರ್ ಶ್ರೀಮತಿ ಜಿ. ಪದ್ಮಾವತಿ, ಬಿ.ಬಿ.ಎಂ.ಪಿ. ಆಯುಕ್ತ ಮಂಜುನಾಥ ಪ್ರಸಾದ್, ಬಿ.ಡಿ.ಎ. ಆಯುಕ್ತ ರಾಕೇಶ್ ಸಿಂಗ್ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿ ತುಷಾರ್ ಗಿರಿನಾಥ್, ಮುಖ್ಯಮಂತ್ರಿಗಳ ಸಂಸದೀಯ ಕಾರ್ಯದರ್ಶಿ ಗೋವಿಂದರಾಜು, ಶಾಸಕರಾದ ಸೋಮಶೇಖರ್, ಬಿ.ಎ. ಬಸವರಾಜು ಸೇರಿದಂತೆ ಅನೇಕ ಉನ್ನತಾಧಿಕಾರಿಗಳು ಉಪಸ್ಥಿತರಿದ್ದರು.

<u>ಸಂಖ್ಯೆ 57/182</u>

## ಕಾರವಾರ ಮತ್ತು ಅಂಕೋಲಾ ಪಟ್ಟಣ-ಹಳ್ಳಿಗಳಿಗೆ ನೀರು ಸರಬರಾಜು ಯೋಜನೆಗೆ ಸಚಿವ ಸಂಪುಟ ಅನುಮೋದನೆ

<u>ಬೆಂಗಳೂರು ಸೆಪ್ಟೆಂಬರ್ 13(ಕರ್ನಾಟಕ ವಾರ್ತೆ)</u>

ಬಹುದಿನಗಳ ಬೇಡಿಕೆಯಾದ ಕಾರವಾರ ಮತ್ತು ಅಂಕೋಲಾ ಪಟ್ಟಣಗಳ ಹಾಗೂ ಸುತ್ತಮುತ್ತಲಿನ ಹಳ್ಳಿಗಳಿಗೆ ನೀರು ಸರಬರಾಜು ಮಾಡುವ ಉದ್ದೇಶದಿಂದ ಗಂಗಾವಳಿ ನದಿಗೆ ಬ್ಯಾರೇಜನ್ನು ನಿರ್ಮಿಸಲು ರೂ. 158.62 ಕೋಟಿ ವೆಚ್ಚದ ವಿಶೇಷ ಯೋಜನೆಗೆ ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ಪಡೆಯಲಾಗಿದೆ ಎಂದು ಬೃಹತ್ ಕೈಗಾರಿಕೆ ಸಚಿವ ಆರ್.ವಿ.ದೇಶಪಾಂಡೆ ಅವರು ತಿಳಿಸಿದ್ದಾರೆ.

ಮುಖ್ಯವಾಗಿ ಬೇಸಿಗೆಯಲ್ಲಿ ಕರಾವಳಿ ಭಾಗದ ನದಿಗಳಲ್ಲಿ ನೀರಿನ ಪ್ರಮಾಣ ತೀವ್ರ ಇಳಿಮುಖವಾಗಿ ಪ್ರತಿವರ್ಷವೂ ಕಾರವಾರ, ಅಂಕೋಲಾ ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕಾಡುತ್ತಿತ್ತು.

ಈ ಸಮಸ್ಯೆಯನ್ನು ಪರಿಹರಿಸುವ ಉದ್ದೇಶದಿಂದ ಕರ್ನಾಟಕ ನಗರ ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿಯು ಗಂಗಾವಳಿ ನದಿಗೆ ಬ್ಯಾರೇಜನ್ನು ನಿರ್ಮಿಸಿ ನೀರಿನ ಅಭಾವವಿರುವ ಈ ಪ್ರದೇಶಗಳಿಗೆ ನೀರು ಸರಬರಾಜು ಮಾಡಲು ರೂ. 158.62 ಕೋಟಿ ವೆಚ್ಚದ ವಿಶೇಷ ಯೋಜನೆಗೆ ಪ್ರಸ್ತಾವನೆ ಸಲ್ಲಿಸಿತ್ತು.

ಇದನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ ಇಂದಿನ ಸಚಿವ ಸಂಪುಟ ಸಭೆಯಲ್ಲಿ ಸದರಿ ಯೋಜನೆಯ ಜಾರಿಗೆ ಹಸಿರು ನಿಶಾನೆ ನೀಡಲಾಗಿದೆ.

ಈ ಯೋಜನೆ ಜಾರಿಗೊಂಡಲ್ಲಿ ಕಾರವಾರ, ಅಂಕೋಲಾ ಪಟ್ಟಣಗಳಲ್ಲದೇ ಸುತ್ತಮುತ್ತಲಿನ ಅಮದಳ್ಳಿ, ಚೆಂಡಿಯಾ, ತೋಡೂರು, ಅರ್ಗಾ, ಬೇಲೇಕೇರಿ, ಅವರ್ಸಾ, ಶಿರಕುಳಿ, ಅಗಸೂರು, ವಂದಿಗೆ-ಶೆಟಗೇರಿ, ಬೊಬ್ರುವಾಡ, ಹಾರವಾಡ, ಬೆಳಂಬಾರ, ಹಟ್ಟಿಕೇರಿ ಮುಂತಾದ ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿನ ಪ್ರದೇಶಗಳ ನೀರಿನ ಸಮಸ್ಯೆ ಪರಿಹರಿಸಲು ಸಾಧ್ಯವಾಗುತ್ತದೆ ಎಂದು ನಿರೀಕ್ಷಿಸಲಾಗಿದೆ.

ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಜಲಸಂಪನ್ಮೂಲ ಇಲಾಖೆಗಳೂ ಈ ಪ್ರಸ್ತಾವನೆಗೆ ಈಗಾಗಲೇ ಒಪ್ಪಿಗೆ ಸೂಚಿಸಿವೆ ಎಂದು ಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಂಖ್ಯೆ 58/183

## ಗಣಿಗಾರಿಕೆ, ಉತ್ಪಾದನೆ ಮತ್ತು ವಾಣಿಜ್ಯ ಪ್ರದರ್ಶನ ಸಮಾವೇಶ – ಸಂಜಯ್ ಕೆ. ಪಟ್ನಾಯಕ್

ಬೆಂಗಳೂರು ಸೆಪ್ಟೆಂಬರ್ 13(ಕರ್ನಾಟಕ ವಾರ್ತೆ)

ಗಣಿಗಾರಿಕೆ ಉದ್ಯಮ ಮತ್ತು ಪ್ರದರ್ಶನ ಕುರಿತು ಮೈನಿಂಗ್ ಮಝ್ಕಾ–2017ರ 7ನೇ ಆವೃತ್ತಿಯನ್ನು ಇದೇ ತಿಂಗಳ 14, 15, 16 ರಂದು ಬೆಂಗಳೂರಿನ ಅಂತಾರಾಷ್ಟ್ರೀಯ ವಸ್ತುಪ್ರದರ್ಶನ ಕೇಂದ್ರದಲ್ಲಿ ಆಯೋಜಿಸಲಾಗಿದೆ ಎಂದು ಫೆಡರೇಷನ್ ಆಫ್ ಇಂಡಿಯನ್ ಮಿನರಲ್ ಇಂಡಸ್ಟ್ರೀಸ್ ಅಧ್ಯಕ್ಷ ಸಂಜಯ್ ಕೆ. ಪಟ್ನಾಯಕ್ ತಿಳಿಸಿದರು.

ಇಂದು ಪತ್ರಕರ್ತರನ್ನುದ್ದೇಶಿಸಿ ಮಾತನಾಡುತ್ತಾ ಕೇಂದ್ರ ಗಣಿ ಸಚಿವಾಲಯ, ಫೆಡರೇಷನ್ ಆಫ್ ಇಂಡಿಯನ್ ಮಿನರಲ್ ಇಂಡಸ್ಟ್ರೀಸ್ ಮತ್ತು ಗಣಿಗಾರಿಕೆಯಲ್ಲಿ ಮುಂದುವರಿದ ದೇಶಗಳ ಸಹಭಾಗಿತ್ವದಲ್ಲಿ ನಡೆಯುವ ಸಮಾವೇಶದ ಬಗ್ಗೆ ಪ್ರಾಸ್ತಾವಿಕವಾಗಿ ಮಾತನಾಡುತ್ತಾ ನಮ್ಮ ದೇಶದ ಜಿ.ಡಿ.ಪಿ. ಅಭಿವೃದ್ಧಿಯಾಗಲು ಖನಿಜ ಸಂಪತ್ತುಗಳ ರಫ್ತು ಹೆಚ್ಚಾಗಬೇಕು. ಆದರೆ ನಮ್ಮ ದೇಶದಲ್ಲಿ ಕೇವಲ ರಫ್ತಿನ ಪ್ರಮಾಣ 0.2%. ಆದರೆ ಕೆನಡಾ, ಆಸ್ಟ್ರೇಲಿಯಾ ಇತರ ಕೆಲವು ದೇಶಗಳ ರಫ್ತಿನ ಪ್ರಮಾಣ 13 ರಿಂದ 14 %. ಕಾರಣ ಭಾರತ ದೇಶದಲ್ಲಿ ತೆರಿಗೆ 69% ಇತರೆ ಗಣಿಗಾರಿಕೆಯಲ್ಲಿ ಮುಂದುವರೆದ ದೇಶಗಳ ತೆರಿಗೆ 30–40% ಇದೆ ಎಂದರು.

ಗಣಿ ಕೈಗಾರಿಕೆಗಳಲ್ಲಿ ಮುಂದುವರೆದ ದೇಶಗಳಲ್ಲಿ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಗೆ ಮತ್ತು ದೇಶದ ಮೂಲ ಸೌಕರ್ಯ ಅಭಿವೃದ್ಧಿ ಮತ್ತು ಉತ್ಪಾದನಾ ಕ್ಷೇತ್ರಗಳಲ್ಲಿ, ಹಿಂದುಳಿದ ವರ್ಗದ ಮತ್ತು ಗಿರಿಜನ ಪ್ರದೇಶದ ಜನರಿಗೆ ಉದ್ಯೋಗಾವಕಾಶವನ್ನು ನೀಡಿ ದೇಶದ ಆರ್ಥಿಕ ಪರಿಸ್ಥಿತಿಯನ್ನು ಅಭಿವೃದ್ಧಿಗೊಳಿಸುತ್ತಿವೆ. ಅದೇ ರೀತಿ ಭಾರತದಲ್ಲೂ ಸಹಾ ಗಣಿ ಕೈಗಾರಿಕೆಯಲ್ಲಿ ಅಭಿವೃದ್ಧಿ ಆಗಬೇಕು ಎಂದು ತಿಳಿಸಿದರು.

ಗಣಿ ಕೈಗಾರಿಕೆಗಳು ಹರಾಜಿನಲ್ಲಿ ಭಾಗವಹಿಸಲು ನಿರಾಸಕ್ತಿ ತೋರುತ್ತಿವೆ. ಕಾರಣ ಕೆಲವು ಕೈಗಾರಿಕಾ ಕಾಯ್ದೆಯ ನೀತಿ ನಿಯಮಗಳು ಕಠಿಣವಾಗಿವೆ. ಕೆಲವು ಕೈಗಾರಿಕೋದ್ಯಮಿಗಳು ಬಂಡವಾಳ ಹೂಡಿ ಹತ್ತಾರು ವರ್ಷಗಳಿಂದ ಅದನ್ನು ವಾಪಸ್ಸು ಪಡೆಯಲು ಹರಸಾಹಸ ಪಡುತ್ತಿದ್ದಾರೆ ಎಂದರು.

ಖನಿಜ ಸಂಪತ್ತುಗಳನ್ನು ಸರಿಯಾದ ರೀತಿ ರಫ್ತು ಮಾಡಿದರೆ ದೇಶದ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಯಾಗುತ್ತದೆ. ಹೆಚ್ಚು ಹೆಚ್ಚು ಜನರಿಗೆ ಉದ್ಯೋಗ ದೊರೆಯುತ್ತದೆ. ಆ ಉದ್ದೇಶಕ್ಕೋಸ್ಕರ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದ ಸುಮಾರು 400 ಕೈಗಾರಿಕೋದ್ಯಮಿಗಳು 5000 ಮಂದಿ ಸಾರ್ವಜನಿಕರು ಈ ಪ್ರದರ್ಶನದಲ್ಲಿ ಭಾಗವಹಿಸುವರು ಎಂದರು.

ಈ ಸಮಯದಲ್ಲಿ ಫೆಡರೇಷನ್ ಆಫ್ ಇಂಡಿಯನ್ ಮಿನರಲ್ ಇಂಡಸ್ಟ್ರೀಸ್‌ನ ಉಪಾಧ್ಯಕ್ಷ ಆರ್.ಕೆ. ಶರ್ಮ ಮತ್ತು ಕಾರ್ಯದರ್ಶಿ ಆರ್.ಎಲ್. ಮೊಹಂತಿ ಉಪಸ್ಥಿತರಿದ್ದರು.

<u>ಸಂಖ್ಯೆ 59/184</u>

## <u>ಕನ್ನಡ ಪುಸ್ತಕ ಪ್ರಾಧಿಕಾರದಿಂದ ಹಲವು ಹೊಸ ಯೋಜನೆಗಳಿಗೆ ಚಾಲನೆ</u>

**ಬೆಂಗಳೂರು, ಸೆಪ್ಟೆಂಬರ್ 13 ( ಕರ್ನಾಟಕ ವಾರ್ತೆ) :**

ಕನ್ನಡ ಪುಸ್ತಕ ಪ್ರಾಧಿಕಾರದಿಂದ ಜನಸಾಮಾನ್ಯರಲ್ಲಿ ಕನ್ನಡ ಪುಸ್ತಕ ಪ್ರೀತಿ ಹೆಚ್ಚಿಸುವುದಕ್ಕಾಗಿ ಮತ್ತು ಪುಸ್ತಕ ಸಂಸ್ಕೃತಿಯನ್ನು ಉಳಿಸುವುದಕ್ಕಾಗಿ ಹಲವು ಹೊಸ ಯೋಜನೆಗಳನ್ನು ಹಮ್ಮಿಕೊಳ್ಳುವುದರ ಮೂಲಕ ಪ್ರಾಧಿಕಾರದ ವ್ಯಾಪ್ತಿಯನ್ನು ವಿಸ್ತರಿಸಲಾಗುತ್ತಿದೆ ಎಂದು ನೂತನ ಅಧ್ಯಕ್ಷರಾದ ಡಾ. ವಸುಂಧರಾ ಭೂಪತಿ ಅವರು ತಿಳಿಸಿದರು.

ಇಂದು ಅವರ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ ಕನ್ನಡ ಪುಸ್ತಕ ಪ್ರಾಧಿಕಾರದಿಂದ ತಮ್ಮ ಅವಧಿಯಲ್ಲಿ ಹಮ್ಮಿಕೊಳ್ಳಲು ಯೋಜಿಸಲಾಗಿರುವ ಯೋಜನೆಗಳ ಕುರಿತು ವಿವರಿಸಿ ಹೇಳಿದರು. ಬದಲಾದ ಕಾಲಕ್ಕನುಗುಣವಾಗಿ ಪ್ರಾಧಿಕಾರದ ಯೋಜನೆಗಳು ಸಹ ಬದಲಾಯಿಸುವ ಉದ್ದೇಶದಿಂದ ಮತ್ತು ವ್ಯಾಪ್ತಿಯನ್ನು ವಿಸ್ತರಿಸುವ ದೃಷ್ಠಿಯಿಂದ ಆನ್‌ಲೈನ್ ಪುಸ್ತಕ ಮಾರಾಟ, ಪ್ರಕಾಶಕರ ಸಮ್ಮೇಳನ, ಪುಸ್ತಕ ಜಾಥಾ, ಕರಡಚ್ಚು ಶಿಬಿರ ಸೇರಿದಂತೆ ವಿಶ್ವವಿದ್ಯಾನಿಲಯಗಳಲ್ಲಿ ಪ್ರಕಾಶನ ಕುರಿತು ಡಿಪ್ಲೋಮೊ ಕೋರ್ಸ್‌ಗಳನ್ನು ಆರಂಭಿಸಲು ಯೋಜಿಸಲಾಗಿದೆ ಎಂದು ಹೇಳಿದರು.

ಮೈಸೂರು ದಸರಾ–2017ರಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರ ಪ್ರಕಾಶಕರಿಗೆ ನೀಡುವ ಪುಸ್ತಕ ಮಳಿಗೆಗಳ ಆವರಣದಲ್ಲಿ ವಿಶೇಷ ಸಾಂಸ್ಕೃತಿಕ ವೇದಿಕೆಯನ್ನು ನಿರ್ಮಿಸಿ ವಿದ್ಯಾರ್ಥಿಗಳಿಗೆ ರಸ ಪ್ರಶ್ನೆ, ಜನ ಸಾಮಾನ್ಯರಿಗಾಗಿ ಪುಸ್ತಕ ಪ್ರೀತಿ, ನನ್ನ ಪ್ರೀತಿಯ ಕವಿತೆ ಸೇರಿದಂತೆ ಪ್ರತಿದಿನ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದರು.

ಪುಸ್ತಕ ಜಾಥಾ: ರಾಜ್ಯಾದ್ಯಂತ ಪುಸ್ತಕಾಸಕ್ತರಿಗಾಗಿ ಅವರಿರುವ ಸ್ಥಳಗಳಲ್ಲಿಯೇ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸೇರಿದಂತೆ ವಿವಿಧ ಅಕಾಡೆಮಿಗಳು ಹಾಗೂ ಪ್ರಾಧಿಕಾರಿಗಳ ಪ್ರಕಟಿತ ಪುಸ್ತಕಗಳು ಲಭ್ಯವಾಗುವಂತೆ ಪುಸ್ತಕ ಜಾಥಾವೊಂದನ್ನು ನಡೆಸಲು ಯೋಜಿಸಿದೆ. ಕೊಡಗಿನಿಂದ ಬೀದರ್ ವರೆಗೆ ಈ ಪುಸ್ತಕ ಜಾಥಾವು ನಡೆಯಲಿದ್ದು, ರಿಯಾಯಿತಿ ದರದಲ್ಲಿ ಎಲ್ಲಾ ಪುಸ್ತಕಗಳು ಲಭ್ಯವಾಗುತ್ತವೆ.

ಪ್ರಕಾಶಕರ ಸಮ್ಮೇಳನ :– ರಾಜ್ಯದಲ್ಲಿ ಸಾವಿರಾರು ಪ್ರಕಾಶಕರು ಕಾರ್ಯನಿರ್ವಹಿಸುತ್ತಿದು, ಅವರುಗಳನ್ನೆಲ್ಲ ಒಂದೆಡೆ ಸೇರಿಸಿ ಅವರುಗಳ ಕುಂದುಕೊರತೆಗಳನ್ನು ಹಾಗೂ ಪರಿಹಾರ ಮಾರ್ಗಗಳನ್ನು ವಿವೇಚಿಸುವ ಕುರಿತು ಅಲ್ಲದೆ ಪ್ರಕಾಶಕರುಗಳ ಜ್ಞಾನ ವಿನಿಮಯ ಉದ್ದೇಶದಿಂದ ಬೆಂಗಳೂರಿನಲ್ಲಿ ಒಂದು ದಿನದ ಪ್ರಕಾಶಕರ ಸಮ್ಮೇಳನವನ್ನು ಆಯೋಜಿಸಲಾಗುವುದು.

ದೇಸಿಜ್ಞಾನ ಪರಂಪರೆ ಮತ್ತು  ಲೋಕ ಕಾಣದ ಲೋಕ ಕಮ್ಮಟ ಮತ್ತು ಪುಸ್ತಕ ಪ್ರಕಟಣೆ : ಲಲಿತ ಕಲೆ, ಗುಡಿಕೈಗಾರಿಕೆ, ಗೃಹ ಉಪಯೋಗಿ ವಸ್ತು ವಿನ್ಯಾಸಗಳು, ಆರೋಗ್ಯ ಅರಿವು ಇತ್ಯಾದಿಗಳನ್ನು ಒಳಗೊಂಡಂತೆ ಸಾವಿರಾರು ಜನ ಹತ್ತು ಹಲವು ಮಾರ್ಗಗಳಿಂದ ಸಮಾಜಕ್ಕೆ ಕೊಡುಗೆಗಳನ್ನು ನೀಡುತ್ತಾ ಬಂದಿದ್ದಾರೆ.  ವಿಭಿನ್ನ ಸಂವೇದನೆಯ ದನಿಗಳನ್ನು ಒಗ್ಗೂಡಿಸಿ ಪುಸ್ತಕ ರೂಪದಲ್ಲಿ ಪ್ರಕಟಿಸುವ ಯೋಜನೆ ಇದಾಗಿದೆ.

ಪುಸ್ತಕಾಭಿರುಚಿ: ಈ ಯೋಜನೆಯಲ್ಲಿ ಪ್ರೌಢಶಾಲೆಯ ಮಟ್ಟದಲ್ಲಿ ವಿದ್ಯಾರ್ಥಿಗಳನ್ನು ಸಂಘಟಿಸಿ ಅವರ ನೆಚ್ಚಿನ ಪುಸ್ತಕಗಳನ್ನು ಕುರಿತು ಚರ್ಚೆಯನ್ನು ಏರ್ಪಡಿಸುವ ಮೂಲಕ ಅವರ ಪುಸ್ತಕಾಭಿರುಚಿಯನ್ನು ಹೆಚ್ಚಿಸಲು ಯೋಜಿಸಲಾಗಿದೆ.

ಇದಲ್ಲದೆ ಜಾಣ ಜಾಣೆಯರ ಬಳಗ ಯೋಜನೆ ಮೂಲಕ ಕಾಲೇಜಿನಿಂದ ಕಾಲೇಜಿಗೆ ಸಾಹಿತ್ಯ ಕ್ಷೇತ್ರಕ್ಕೆ ಸಂಬಂಧಿಸಿದಂತೆ ವಿವಿಧ ಸ್ಪರ್ದೆಗಳನ್ನು ಏರ್ಪಡಿಸಿ, ವಿವಿಧ ಹಂತಗಳಲ್ಲಿ ಬಹುಮಾನ ವಿತರಿಸುವ ಮೂಲಕ ವಿದ್ಯಾರ್ಥಿಗಳ ಪುಸ್ತಕಾಭಿರುಚಿಯನ್ನು ಹೆಚ್ಚಿಸುವುದು.

ಕರಡಚ್ಚು ಶಿಬಿರ: ಹಸ್ತಪ್ರತಿಯಿಂದ ಡಿ.ಟಿ.ಪಿ. ಕರಡಚ್ಚಿ ತಿದ್ದುವುದು.  ಲ್ಯಾಮಿನೇಷನ್, ಮುಖಪುಟ ವಿನ್ಯಾಸ, ಇತ್ಯಾಧಿಗಳಿಗೆ ಸಂಬಂಧಿಸಿದಂತೆ ಮಹಿಳೆಯರಿಗಾಗಿ ಶಿಬಿರವನ್ನು ಏರ್ಪಡಿಸಿ ವಿಭಾಗ ಮಟ್ಟದಲ್ಲಿ ಪ್ರಕಾಶನ ಕ್ಷೇತ್ರದಲ್ಲಿ ತಿಳುವಳಿಕೆಯನ್ನು ನೀಡಲು ಯೋಜಿಸಲಾಗಿದೆ.

ವಿಶೇಷ ಕೋರ್ಸ್: ವಿಶ್ವವಿದ್ಯಾಲಯದ ಮಟ್ಟದಲ್ಲಿ ಪ್ರಕಾಶನದ ವಿವಿಧ ಹಂತಗಳಾದ ಹಸ್ತಪ್ರತಿಯಿಂದ ಆರಂಭಿಸಿ ಡಿ.ಟಿ.ಪಿ. ಕರಡಚ್ಚು ತಿದ್ದುವುದು, ಪುಸ್ತಕ ಪ್ರಕಟಣೆ/ಪ್ರಕಾಶನ ಇತ್ಯಾದಿಗಳಿಗೆ ಸಂಬಂಧಿಸಿದಂತೆ ಡಿಪ್ಲೊಮೋ ಅಥವಾ ಸರ್ಟಿಫಿಕೇಟ್ ಕೋರ್ಸ್ ಆರಂಭಿಸಲು ವಿವಿಧ ವಿಶ್ವವಿದ್ಯಾಲಯಗಳನ್ನು ಸಂಪರ್ಕಿಸಲು ಯೋಜಿಸಲಾಗಿದೆ.

ವೆಬ್‌ಸೈಟ್: ಪ್ರಾಧಿಕಾರದ ವೆಬ್‌ಸೈಟ್ ಅನ್ನು ಪ್ರಸಕ್ತ ವಿದ್ಯಾಮಾನಕ್ಕೆ ತಕ್ಕಂತೆ ಉನ್ನತೀಕರಿಸಲು ಮತ್ತು ಸಾಮಾಜಿಕ ಜಾಲತಾಣಗಳನ್ನು ಪುಸ್ತಕಾಭಿರುಚಿಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಬಳಕೆ ಮಾಡಿಕೊಳ್ಳಲು ಯೋಜಿಸಲಾಗಿದೆ.

ಪುಸ್ತಕೋದ್ಯಮ ಚಾರಿತ್ರಿಕ ನೋಟ :  ಪುಸ್ತಕೋದ್ಯಮವು ಹುಟ್ಟಿ ಈವರೆವಿಗೆ ನಡೆದು ಬಂದ ದಾರಿಯ ಬಗ್ಗೆ ಸಾದ್ಯಂತವಾಗಿ ನಿರೂಪಿಸುವ ಗ್ರಂಥವೊಂದನ್ನು ಪ್ರಕಟಿಸಲು ಯೋಜಿಸಲಾಗಿದ್ದು, ಇದಕ್ಕಾಗಿ ಸಮಿತಿಯೊಂದನ್ನು ರಚಿಸಲಾಗುವುದು.

ಆನ್‌ಲೈನ್ ಪುಸ್ತಕ ಮಾರಾಟ : ಪ್ರಾಧಿಕಾರದ ಪ್ರಕಟಿತ ಪುಸ್ತಕಗಳನ್ನು ಆನ್‌ಲೈನ್ ಮೂಲಕ ಆಸಕ್ತರಿಗೆ ತಲುಪಿಸಲು ಅಗತ್ಯವಿರುವಂತೆ ಸಿರಿಗನ್ನಡ ಮಾರಾಟ ಮಳಿಗೆಯ ತಂತ್ರಜ್ಞಾನವನ್ನು ಪರಿಷ್ಕರಿಸಲಾಗುತ್ತದೆ.

ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಯ ಪರಿಷ್ಕರಣೆ: ಪ್ರಸ್ತುತ ರಜ್ಯದ 22 ಕಡೆಗಳಲ್ಲಿ ಪ್ರಾಧಿಕಾರದ ಪರವಾಗಿ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಗಳು ಕಾರ್ಯನಿರ್ವಹಿಸುತ್ತಿವೆ. ಇವರುಗಳ ಮಾರಾಟ ಪ್ರಕ್ರಿಯೆಯನ್ನು ಉತ್ತಮಪಡಿಸಿ ಅವುಗಳನ್ನು ಸಕ್ರಿಯವಾಗಿಸಲು ಕ್ರಮಕೈಗೊಳ್ಳಲಾಗುವುದು. ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗುವಂತೆ ನೋಡಿಕೊಳ್ಳುವುದು ಎಂದು ಯೋಜನೆಗಳ ಬಗ್ಗೆ ವಿವರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರದ ಸದಸ್ಯ ದ್ವಾರನಕುಂಟೆ ಪಾತಣ್ಣ ಅವರು ಉಪಸ್ಥಿತರಿದ್ದರು.

ಎಸ್‌ಎಂ:ಜೆಡಿ:ಜಿಪಿಆರ್.

**<u>ಸಂಖ್ಯೆ 60/187</u>**

# <u>ಶಿಷ್ಯವೇತನ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ</u>

**ಬೆಂಗಳೂರು, ಸೆಪ್ಟೆಂಬರ್ 13 ( ಕರ್ನಾಟಕ ವಾರ್ತೆ) :**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ 2017-18 ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ", "ಶುಲ್ಕ ವಿನಾಯಿತಿ", ವಿದ್ಯಾಸಿರಿ, "ಊಟ ಮತ್ತು ವಸತಿ ಸಹಾಯ ಯೋಜನೆ" ಮತ್ತು ನರ್ಸಿಂಗ್ ವಿದ್ಯಾರ್ಥಿಗಳಿಗೆ ಶಿಷ್ಯವೇತನ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.

ವೃತ್ತಿಪರ ಕೋರ್ಸುಗಳ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಅರ್ಜಿ ಸಲ್ಲಿಸುವ ದಿನಾಂಕವನ್ನು ಸೆಪ್ಟೆಂಬರ್ ರವರೆಗೆ ವಿಸ್ತರಿಸಲಾಗಿದೆ.

ಅರ್ಜಿಯನ್ನು ಆನ್‌ಲೈನ್ ಮೂಲಕ **kareepass.cgg.gov.in** ಹಾಗೂ **www.backwardclasses.kar.nic.in** ನಲ್ಲಿ ಸಲ್ಲಿಸಬಹುದು. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 20 ಕೊನೆಯ ದಿನವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ www.backwardclasses.kar.nic.in ನಲ್ಲಿ ನೋಡಬಹುದು. ದೂರವಾಣಿ ಸಂಖ್ಯೆ 080–65970005 ಹಾಗೂ 080–65970006 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 61/188

# "ಸೈನ್ಸ್ ಆಫ್ ಕ್ಯಾಂಡಲ್ಸ್" ಕುರಿತು ಒಂದು ದಿನ ಕಾರ್ಯಾಗಾರ

ಬೆಂಗಳೂರು, ಸೆಪ್ಟೆಂಬರ್ 13 ( ಕರ್ನಾಟಕ ವಾರ್ತೆ) :

ಜವಾಹರಲಾಲ್ ನೆಹರು ತಾರಾಲಯ ಹಾಗೂ ಬೆಂಗಳೂರು ಅಸೋಸಿಯೇಷನ್ ಫಾರ್ ಸೈನ್ಸ್ ಎಜುಕೇಶನ್ ವತಿಯಿಂದ ಸೆಪ್ಟೆಂಬರ್ 15 ರಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 3.30 ಗಂಟೆವರೆಗೆ ಒಂದು ದಿನ ಕಾರ್ಯಾಗಾರವನ್ನು ಜವಾಹರ್‌ಲಾಲ್ ನೆಹರು ತಾರಾಲಯ, ಶ್ರೀ ಟಿ. ಚೌಡಯ್ಯ ರಸ್ತೆ, ಹೈಗ್ರೌಂಡ್ಸ್, ಬೆಂಗಳೂರು – 1 ಇಲ್ಲಿ 8 ರಿಂದ 10ನೇ ತರಗತಿಯಲ್ಲಿ ಕರ್ತವ್ಯ ನಿರ್ವಹಿಸುವ ವಿಜ್ಞಾನ ಶಿಕ್ಷಕರಿಗಾಗಿ ಹಮ್ಮಿಕೊಂಡಿದೆ.

ಆಸಕ್ತ ಶಿಕ್ಷಕರು ಹೆಚ್ಚಿನ ಮಾಹಿತಿಗಾಗಿ ಸೆಪ್ಟೆಂಬರ್ 14 ರೊಳಗೆ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳಬಹುದಾಗಿದ್ದು ಅಥವಾ ಇ ಮೇಲ್ info@taralaya.org. ಮೊದಲು ತಮ್ಮ ಹೆಸರುಗಳನ್ನು ನೋಂದಾಯಿಸುವ ಶಿಕ್ಷಕರಿಗೆ ಪ್ರಥಮ ಆದ್ಯತೆ ಮೇಲೆ ಕಾರ್ಯಾಗಾರದಲ್ಲಿ ಪಾಲ್ಗೊಳ್ಳಲು ಅವಕಾಶ ಕಲ್ಪಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಜವಾಹರಲಾಲ್ ನೆಹರು ತಾರಾಲಯದ ದೂರವಾಣಿ ಸಂಖ್ಯೆ 2237 9725/2220 3234 ಅಥವಾ ವೆಬ್‌ಸೈಟ್ http://www.taralaya.org/announcements.php ಮೂಲಕ ವೀಕ್ಷಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 62/189

## ಹಿಂದುಳಿದ ವರ್ಗದ ಪತ್ರಿಕೋದ್ಯಮ ಪದವಿದರ ಅಭ್ಯರ್ಥಿಗಳಿಗೆ ವೃತ್ತಿ ನಿರೂಪಣಾ ಕೌಶಲ್ಯ/ವ್ಯಕ್ತಿ ವಿಕಸನ ತರಬೇತಿಗಾಗಿ ಅರ್ಜಿ ಆಹ್ವಾನ

ಬೆಂಗಳೂರು ಸೆಪ್ಟೆಂಬರ್ 13(ಕರ್ನಾಟಕ ವಾರ್ತೆ)

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿಂದುಳಿದ ವರ್ಗದ ಪತ್ರಿಕೋದ್ಯಮ ಪದವಿ, ಸ್ನಾತಕೋತ್ತರ ಪದವಿ, ವಿದ್ಯುನ್ಮಾನ ಮಾಧ್ಯಮದಲ್ಲಿ ಪದವಿ, ಪಿ.ಜಿ. ಡಿಪ್ಲೊಮಾ ಪಡೆದ ಅಭ್ಯರ್ಥಿಗಳಿಗಾಗಿ ಆರು ದಿವಸಗಳ ವೃತ್ತಿ ನಿರೂಪಣಾ ಕೌಶಲ್ಯ/ವ್ಯಕ್ತಿ ವಿಕಸನ ತರಬೇತಿಗಾಗಿ ಅರ್ಜಿ ಆಹ್ವಾನಿಸಿದೆ.

ಕೆಟಗರಿ 1, 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ವಿಭಾಗದಿಂದ ಅರ್ಜಿ ನಮೂನೆಯನ್ನು ಪಡೆಯಬಹುದು. ಇಲ್ಲವೆ ಇಲಾಖೆಯ ವೆಬ್‌ಸೈಟ್ **www.karnatakainforamtion.gov.in** ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು.

ಅಭ್ಯರ್ಥಿ ಹೆಸರು, ಜನ್ಮ ದಿನಾಂಕ, ಖಾಯಂ ವಿಳಾಸ, ವಿದ್ಯಾರ್ಹತೆ, ಜಾತಿ, ಶೇಕಡಾವಾರು ಅಂಕ, ಉದ್ಯೋಗ ವಿವರ ಹಾಗೂ ಈ ಹಿಂದೆ ಯಾವುದಾದರು ತರಬೇತಿ ಪಡೆದ ವಿವರ ಮತ್ತು ವಿಶೇಷ ಸಾಧನೆಗಳನ್ನೊಳಗೊಂಡ ಸ್ವ ವಿವರಗಳ ಮಾಹಿತಿಗಳನ್ನು ಭರ್ತಿ ಮಾಡಿ ಸ್ವ ವಿಳಾಸ ಇರುವ ಲಕೋಟೆಯೊಂದಿಗೆ ಅರ್ಜಿಯನ್ನು ಸಲ್ಲಿಸಬಹುದು.

ಅರ್ಜಿಯೊಂದಿಗೆ ಅಂಕಪಟ್ಟಿ, ಜಾತಿ ಪ್ರಮಾಣ ಪತ್ರ, ವಿಳಾಸ ಹಾಗೂ ವಯಸ್ಸನ್ನು ಧೃಢೀಕರಿಸುವ ದಾಖಲೆಗಳ ಪ್ರತಿಯನ್ನು ಲಗತ್ತಿಸಿ ದಿನಾಂಕ: 3–10–2017 ರ ಸಂಜೆ 5–00 ಗಂಟೆಯೊಳಗೆ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು 560 001 ಇವರಿಗೆ ಸಲ್ಲಿಸಬೇಕು.

ಲಕೋಟೆಯ ಮೇಲ್ಭಾಗದಲ್ಲಿ "ವೃತ್ತಿ ನಿರೂಪಣಾ ಕೌಶಲ್ಯ/ವ್ಯಕ್ತಿ ವಿಕಸನ ತರಬೇತಿಗಾಗಿ ಅರ್ಜಿ (ಹಿಂದುಳಿದ ವರ್ಗ)" ಎಂದು ನಮೂದಿಸಿರಬೇಕು. ಹೆಚ್ಚಿನ ಮಾಹಿತಿಗಾಗಿ ಸುದ್ದಿ ಮತ್ತು ಪತ್ರಿಕಾ ವಿಭಾಗದ, ಉಪ ನಿರ್ದೇಶಕರು ಇವರನ್ನು ದೂರವಾಣಿ ಸಂಖ್ಯೆ 080–22028037/87 ರ ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.